ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ

**KARNATAKA LEGISLATIVE ASSEMBLY RESEARCH AND REFERENCE BRANCH**

## ಪತ್ರಿಕಾ ತುಣುಕುಗಳು
## PAPER CLIPPINGS

ವಿಭಾಗ / ವಿಷಯ : DEPARTMENT / SUBJECT:

ಪತ್ರಿಕೆಯ ಹೆಸರು : NAME OF THE NEWS PAPER: ದಿನಾಂಕ : DATE

### 8 ಮಸೂದೆಗಳಿಗೆ ಮೇಲ್ಮನೆ ಅಸ್ತು

ವಿಧಾನ ಪರಿಷತ್ತು: ವಿಧಾನಸಭೆಯಲ್ಲಿ ಅಂಗೀಕಾರಗೊಂಡಿರುವ ಎಂಟು ವಿಧೇಯಕಗಳಿಗೆ ಮೇಲ್ಮನೆಯಲ್ಲಿ ಅನುಮೋದನೆ ನೀಡಲಾಯಿತು. ವಿಶೇಷವಾಗಿ ಕರ್ನಾಟಕ ಭೂ ಸುಧಾರಣೆ ವಿಧೇಯಕದ ಮೇಲೆ 50 ನಿಮಿಷಗಳ ಕಾಲ ಸುದೀರ್ಘವಾಗಿ ಚರ್ಚೆ ನಡೆದ ನಂತರವೇ ಒಪ್ಪಿಗೆ ನೀಡಲಾದರೆ, ಕರ್ನಾಟಕ ನಗರಪಾಲಿಕೆ (ತಿದ್ದುಪಡಿ) ವಿಧೇಯಕದ ಮೇಲೆಯೂ ಕೂಡಾ ಅರ್ಧ ಗಂಟೆಗೂ ಅಧಿಕ ಕಾಲ ಚರ್ಚೆ ನಡೆದು ಒಪ್ಪಿಗೆ ಸೂಚಿಸಲಾಯಿತು. ಕರ್ನಾಟಕ ಸಾರ್ವಜನಿಕ ಸಂಗ್ರಹಣೆಗಳಲ್ಲಿ ಪಾರದರ್ಶಕತೆ (ತಿದ್ದುಪಡಿ) ವಿಧೇಯಕ, ಭಾರತ ರಾಷ್ಟ್ರೀಯ ಕಾನೂನು ವಿದ್ಯಾಲಯ (ತಿದ್ದುಪಡಿ ವಿಧೇಯಕ), ಕರ್ನಾಟಕ ರಾಷ್ಟ್ರಭಾಷಾ ವಿದ್ಯಾಲಯ (ತಿದ್ದುಪಡಿ) ವಿಧೇಯಕ, ಕರ್ನಾಟಕ ಕಾನೂನು ವಿಶ್ವವಿದ್ಯಾಲಯ (ತಿದ್ದುಪಡಿ) ವಿಧೇಯಕ), ಕರ್ನಾಟಕ ಪೌರಸಭೆಗಳು ಮತ್ತು ಕೆಲವು ಇತರ ಕಾನೂನು (ತಿದ್ದುಪಡಿ) ವಿಧೇಯಕ, ಕರ್ನಾಟಕ ರಾಜ್ಯ ವಿಶ್ವವಿದ್ಯಾಲಯಗಳ (ತಿದ್ದುಪಡಿ) ವಿಧೇಯಕಕ್ಕೆ ಅನುಮೋದನೆ ನೀಡಲಾಯಿತು.